ಕರ್ನಾಟಕ ಸರ್ಕಾರ
# ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ
(ಕರ್ನಾಟಕ ಸರ್ಕಾರದ ಅಂಗ ಸಂಸ್ಥೆ)

Government of Karnataka
# Karnataka Residential Educational Institutions Society
(An Organisation of Govt. of Karnataka)

ಸಂಖ್ಯೆ: ಕವಶಿಸಸ/ಶಿಕ್ಷಣ(1)/ಸಿ.ಆರ್- /2017-18 ದಿನಾಂಕ: 27.04.2017

**ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು/**
**ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ**
**ಕಲ್ಯಾಣ ಇಲಾಖೆ/ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು/**
**ಯೋಜನಾ ಸಮನ್ವಯಾಧಿಕಾರಿಗಳು, ಸಮಗ್ರ ಗಿರಿಜನ**
**ಅಭಿವೃದ್ಧಿ ಯೋಜನೆ**
------------------- ಜಿಲ್ಲೆ

**ಮಾನ್ಯರೆ,**

ವಿಷಯ: 2017-18ನೇ ಸಾಲಿಗೆ ಮೊರಾರ್ಜಿ ದೇಸಾಯಿ ಪದವಿ ಪೂರ್ವ ವಿಜ್ಞಾನಕಾಲೇಜು/ಏಕಲವ್ಯಮಾದರಿ ಪದವಿ ಪೂರ್ವ ವಿಜ್ಞಾನ ಕಾಲೇಜುಗಳಿಗೆ ಪ್ರಥಮ ಪಿ.ಯು.ಸಿ. ತರಗತಿಗಳಿಗೆ ದಾಖಲಾತಿ ಪ್ರವೇಶಕ್ಕಾಗಿ ಮಾರ್ಗಸೂಚಿ-2017ರೊಂದಿಗೆ ಪ್ರವೇಶ ಅರ್ಜಿಯನ್ನು ಕಳುಹಿಸುತ್ತಿರುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ರಾಜ್ಯದಲ್ಲಿ ಒಟ್ಟು 26 ಮೊರಾರ್ಜಿ ದೇಸಾಯಿ ಪದವಿ ಪೂರ್ವ ವಿಜ್ಞಾನ ಕಾಲೇಜುಗಳು ಹಾಗೂ 04 ಏಕಲವ್ಯ ಮಾದರಿ ವಸತಿ ಪದವಿ ಪೂರ್ವ ವಿಜ್ಞಾನ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ.

2017-18ನೇ ಶೈಕ್ಷಣಿಕ ಸಾಲಿಗೆ ಪ್ರಥಮ ಪಿ.ಯು.ಸಿ. ತರಗತಿಗಳಿಗೆ ಮೊರಾರ್ಜಿ ದೇಸಾಯಿ ಪದವಿ ಪೂರ್ವ ವಿಜ್ಞಾನ ಕಾಲೇಜು/ಏಕಲವ್ಯ ಮಾದರಿ ಪದವಿ ಪೂರ್ವ ವಿಜ್ಞಾನ ಕಾಲೇಜುಗಳಲ್ಲಿ PCMB & PCMC ಸಂಯೋಜನೆಗಳಿಗೆ ವಿದ್ಯಾರ್ಥಿಗಳನ್ನು ದಾಖಲಾತಿ ಮಾಡಿಕೊಳ್ಳಬೇಕಾಗಿದೆ. ಈಗಾಗಲೇ ಹಿಂದಿನ ವರ್ಷಗಳಲ್ಲಿ ನೀಡಿದ್ದ ದಾಖಲಾತಿ ಮಾರ್ಗಸೂಚಿಯಲ್ಲಿ ತಿಳಿಸಿರುವಂತೆ (ಪ್ರತಿಯನ್ನು ಲಗತ್ತಿಸಿದೆ) ಪ್ರಥಮ ಪಿ.ಯು.ಸಿ. ತರಗತಿಗಳಿಗೆ ವಿದ್ಯಾರ್ಥಿಗಳನ್ನು ದಾಖಲಾತಿ ಮಾಡಿಕೊಳ್ಳಲು ಅರ್ಜಿ ನಮೂನೆಯನ್ನು ಸಂಘದ ವೆಬ್ ಸೈಟ್ ನಲ್ಲಿ ಬಿಡಲಾಗಿದೆ. ದಾಖಲಾತಿ ಅರ್ಜಿಗಳನ್ನು ಅಗತ್ಯಕ್ಕೆ ತಕ್ಕಷ್ಟು ಡೌನ್ ಲೋಡ್ ಮಾಡಿಕೊಳ್ಳಬಹುದಾಗಿದೆ. ಈ ಬಗ್ಗೆ ತಾವು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿರುವ ಜಿಲ್ಲಾ ಸಮಿತಿ ಸಭೆಯನ್ನು ನಡೆಸಿ, ಮಾರ್ಗಸೂಚಿಯಲ್ಲಿನ ಅನುಬಂಧ-2 ರಲ್ಲಿ ತಿಳಿಸಿರುವಂತೆ ಸಾರ್ವಜನಿಕ ಪ್ರಕಟಣೆ ನೀಡಿ ಅರ್ಜಿ ವಿತರಣೆ, ಸ್ವೀಕರಣೆ ಇತ್ಯಾದಿ ಕೆಲಸಗಳನ್ನು ಸಮರ್ಪಕವಾಗಿ ನಿರ್ವಹಿಸುವುದು.

ಸರ್ಕಾರದ ಅಧಿಸೂಚನೆ ದಿನಾಂಕ: 06-11-2013 ರಲ್ಲಿ ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಕಾಲೇಜುಗಳಲ್ಲಿ ಶೇ.70 ರಷ್ಟು ಸೀಟುಗಳನ್ನು ಹೈದ್ರಾಬಾದ್ - ಕರ್ನಾಟಕ ಪ್ರದೇಶದ ವಿದ್ಯಾರ್ಥಿಗಳಿಗೆ ಮೀಸಲಿರಿಸಬೇಕೆಂದು ಹಾಗೂ ರಾಜ್ಯದ ಇತರೆ ಜಿಲ್ಲೆಗಳ ಪದವಿ ಪೂರ್ವ ವಸತಿ ಕಾಲೇಜುಗಳಲ್ಲಿ ಶೇ.8 ರಷ್ಟು ಸೀಟುಗಳನ್ನು ಹೈದ್ರಾಬಾದ್ - ಕರ್ನಾಟಕ ಪ್ರದೇಶದ ವಿದ್ಯಾರ್ಥಿಗಳಿಗೆ ಮೀಸಲಿಟ್ಟು,

ನಂ. 8, ಎಂ.ಎಸ್.ಬಿ.-1, 6 & 7ನೇ ಮಹಡಿ, ಕನ್ನಿಂಗ್‌ಹ್ಯಾಮ್ ರಸ್ತೆ, ಬೆಂಗಳೂರು - 560 022. ದೂರವಾಣಿ : 080-22283366, 22265755, 22204466, 22207722, ಟೆಲೆಫ್ಯಾಕ್ಸ್ : 080-22262288.
# 8, M.S.B.-1, 6 & 7th Floor, Cunningham Road, Bengaluru-560022. Phone 080-22283366, 22265755, 22204466, 22207722, Telefax : 080-22262288.
E-mail : edkreis@rediff.com, Websidte : www.kreis.kar.nic.in

ಭರ್ತಿ ಮಾಡಿಕೊಳ್ಳಬೇಕಾಗಿದೆ. ಆದುದರಿಂದ ಸಾರ್ವಜನಿಕ ಪ್ರಕಟಣೆಯಲ್ಲಿ ಈ ವಿಷಯವನ್ನು ಸೂಕ್ತವಾಗಿ ಅಳವಡಿಸಿಕೊಂಡು ಪ್ರಕಟಣೆ ನೀಡುವುದು.

2017-18ನೇ ಶೈಕ್ಷಣಿಕ ವರ್ಷದಲ್ಲಿ ಅನೇಕ ಜಿಲ್ಲೆಗಳ ಕಾಲೇಜುಗಳಲ್ಲಿ ಲಭ್ಯವಿರುವ ಸೀಟುಗಳಿಗಿಂತ ಕಡಿಮೆ ವಿದ್ಯಾರ್ಥಿಗಳು ದಾಖಲಾಗಿರುವುದನ್ನು ಗಮನಿಸಲಾಗಿದೆ. ಆದ್ದರಿಂದ ಈ ಶೈಕ್ಷಣಿಕ ವರ್ಷಕ್ಕೆ ಅನುಬಂಧ-4 ರಂತೆ ಮೀಸಲಾತಿಯನ್ನು ತಪ್ಪದೇ ಪಾಲಿಸಿ ವಿದ್ಯಾರ್ಥಿಗಳನ್ನು ಆಯ್ಕೆಮಾಡಿ ಪೂರ್ಣ ಪ್ರಮಾಣದಲ್ಲಿ ದಾಖಲಾತಿ ಮಾಡಿಕೊಳ್ಳುವುದು. ತೆಗೆದುಕೊಂಡ ಕ್ರಮದ ಬಗ್ಗೆ ಸಂಘಕ್ಕೆ ವರದಿ ಮಾಡುವುದು.

ಕಾರ್ಯನಿರ್ವಾಹಕ ನಿರ್ದೇಶಕರು.

ಪ್ರತಿಯನ್ನು:-

1. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ---------------- ಜಿಲ್ಲೆ ಇವರ ಮಾಹಿತಿಗಾಗಿ.
2. ಸಂಬಂಧಪಟ್ಟ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಮುಂದಿನ ಕ್ರಮಕ್ಕಾಗಿ.

# ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ

(ಕರ್ನಾಟಕ ಸರ್ಕಾರದ ಅಂಗ ಸಂಸ್ಥೆ)

## ಪ್ರಥಮ ಪಿ.ಯು.ಸಿ ತರಗತಿ ಪ್ರವೇಶ ಪರೀಕ್ಷೆ –2017

## ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ, ಏಕಲವ್ಯ ಮಾದರಿ ವಸತಿ ಕಾಲೇಜುಗಳ ಪ್ರವೇಶ ಮಾರ್ಗಸೂಚಿ–2017

ನಂ.8, ಎಂ.ಎಸ್.ಬಿ–1,6 ಮತ್ತು 7ನೇ ಮಹಡಿ, ಕನ್ನಿಂಗ್‌ಹ್ಯಾಮ್ ರೋಡ್,
ಬೆಂಗಳೂರು–560022,
ದೂರವಾಣಿ ಸಂಖ್ಯೆ : 080– 22283366 22204466,22207722
ಟೆಲಿಫ್ಯಾಕ್ಸ್ – 080 –22262288
ಇ–ಮೇಲ್ : edkreis@rediff.com
ವೆಬ್ ಸೈಟ್ : www.kreis.kar.nic.in

# ಪ್ರಥಮ ಪಿ.ಯು.ಸಿ. ತರಗತಿಗೆ ಪ್ರವೇಶ ದಾಖಲಾತಿ –2017-18ನೇ ಸಾಲಿಗೆ

## ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ, ಏಕಲವ್ಯ ಮಾದರಿ ಪದವಿ ಪೂರ್ವ ವಿಜ್ಞಾನ ಕಾಲೇಜುಗಳಿಗೆ ಪ್ರವೇಶ ದಾಖಲಾತಿ

# ಪ್ರವೇಶ ದಾಖಲಾತಿ ಮಾರ್ಗಸೂಚಿ – 2017

## ರಚನಾ ಸಮಿತಿ.

| ಅಧ್ಯಕ್ಷರು | ರಚನೆ ಮತ್ತು ಸಲಹೆ |
|---|---|
| ಶ್ರೀ. ಎಮ್.ಆರ್.ಹಿರೇಮಠ್, ಕೆ.ಎ.ಎಸ್.<br>ಕಾರ್ಯನಿರ್ವಾಹಕ ನಿರ್ದೇಶಕರು,<br>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ,<br>ಬೆಂಗಳೂರು. | ಕಛೇರಿಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು |